ಶ್ರೀ ಗೋವಿಂದ ಎಂ. ಕಾರಜೋಳ: ಬೀಟ್ ಸಿಬ್ಬಂದಿಗಳ್ಯಾರು ಸುಳ್ಳು ವರದಿಯನ್ನು ಕೊಟ್ಟಿದ್ದಾರೆ, ಅವರನ್ನೂ ಸೇರಿಸಿಕೊಂಡು suspend ಮಾಡಬೇಕು.

ಶ್ರೀ ಕೆ.ಜೆ. ಜಾರ್ಜ್: Report ಬರಲಿ. ಆ report ಆಧರಿಸಿ ಏನು ಕ್ರಮ ತೆಗೆದುಕೊಳ್ಳಬೇಕೋ ಅದರಂತೆ ಕ್ರಮ ವಹಿಸುತ್ತೇವೆ.

ವಿಷಯ: ಶಿಕಾರಿಪುರ ತಾಲ್ಲೂಕಿನಲ್ಲಿ ಸಿದ್ಧರಾಮೇಶ್ವರ ಭವನ, ವಾಲ್ಮೀಕಿ ಭವನ, ಅಂಬೇಡ್ಕರ್ ಭವನ ಮತ್ತು ಬಣಜಾರ್ ಭವನಗಳನ್ನು ಆಯಾ ಸಮುದಾಯದವರ ಕಾರ್ಯಕ್ರಮಗಳಿಗೆ ರಿಯಾಯಿತಿ ದರದಲ್ಲಿ ನೀಡುವ ಬಗ್ಗೆ.

ಶ್ರೀ ಬಿ.ವೈ. ರಾಘವೇಂದ್ರ (ಶಿಕಾರಿಪುರ): ಮಾನ್ಯ ಅಧ್ಯಕ್ಷರೆ, ಶಿಕಾರಿಪುರ ತಾಲ್ಲೂಕಿನಲ್ಲಿ ಸಿದ್ಧರಾಮೇಶ್ವರ ಭವನ, ವಾಲ್ಮೀಕಿ ಭವನ, ಅಂಬೇಡ್ಕರ್ ಭವನ ಮತ್ತು ಬಣಜಾರ್ ಭವನಗಳನ್ನು ಆಯಾ ಸಮುದಾಯದವರ ಕಾರ್ಯಕ್ರಮಗಳಿಗೆ ರಿಯಾಯಿತಿ ದರದಲ್ಲಿ ನೀಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನವನ್ನು ಸೆಳೆಯುತ್ತೇನೆ.

ಅಧ್ಯಕ್ಷರು: ನಿಮ್ಮ ಗಮನ ಸೆಳೆಯುವ ಸೂಚನೆಗೆ ಉತ್ತರ ಬಂದಿಲ್ಲ. ಮುಂದಿನ ಸಲ ಹಾಕಿಕೊಳ್ಳೋಣ. ಈಗ ಸಂಬಂಧಪಟ್ಟ ಮಂತ್ರಿಗಳು ಕೂಡ ಈಗ ಇಲ್ಲ.

ಶ್ರೀ ಬಿ.ವೈ. ರಾಘವೇಂದ್ರ: ಆಯಿತು.

ಅಧ್ಯಕ್ಷರು: ಮುಂದಿನ ಗಮನ ಸೆಳೆಯುವ ಸೂಚನೆ ಪ್ರಮೋದ್ ಮಧ್ವರಾಜ್, ಬಂದಿಲ್ಲ. ಮುಂದಿನ ಗಮನ ಸೆಳೆಯುವ ಸೂಚನೆ ಈ. ತುಕಾರಾಂ.

ವಿಷಯ: ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನಲ್ಲಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗಳಲ್ಲಿ